ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ರಾಯಚೂರಿನಲ್ಲಿರುವ ರಿಮ್ಸ್ ಆಸ್ಪತ್ರೆಯ ಬಗ್ಗೆ

ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದಚುನಾಯಿತರಾದವರು):-

950 (1215) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರಿನಲ್ಲಿರುವ ರೀಮ್ಸ್ ಕಾಲೇಜಿಗೆ ಮಂಜೂರಾದ ಒಟ್ಟು ಪ್ರವೇಶಾವಕಾಶಗಳು ಎಷ್ಟು ; ಇದಕ್ಕೆ ಅನುಗುಣವಾಗಿ ಆಸ್ಪತ್ರೆಗೆ ಬೇಕಾಗಿರುವ ಹಾಸಿಗೆಗಳು ಎಷ್ಟು ; ಪ್ರಸ್ತುತ ಇರುವ ಹಾಸಿಗೆಗಳು ಎಷ್ಟು;

(ಆ) ರಾಯಚೂರು ರೀಮ್ಸ್ ಮೆಡಿಕಲ್ ಕಾಲೇಜಿನಲ್ಲಿರುವ ಒಟ್ಟು ಪ್ರಾಧ್ಯಾಪಕರ ಹುದ್ದೆಗಳು ಎಷ್ಟು; ಖಾಲಿ ಇರುವ ಹುದ್ದೆಗಳು ಎಷ್ಟು; ಭರ್ತಿ ಮಾಡಿರುವ ಹುದ್ದೆಗಳು ಎಷ್ಟು;

(ಇ) ರಾಯಚೂರು ರೀಮ್ಸ್ ಆಸ್ಪತ್ರೆಯಲ್ಲಿ ತಜ್ಞ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?